ಕರ್ನಾಟಕ ಸರ್ಕಾರ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-560052.

## ವಿದ್ಯಾರ್ಥಿಗಳಿಗೆ ಸೂಚನೆಗಳು (Instructions to Candidates)

2023-24ನೇ ಸಾಲಿಗೆ ರಾಜ್ಯದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ NEET ಹಾಗೂ JEE (MAINS & ADVANCED) ಪರೀಕ್ಷಾ ಪೂರ್ವ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, ಹಿಂದುಳಿದವರ್ಗಗಳ ಅರ್ಹ ವಿದ್ಯಾರ್ಥಿಗಳಿಂದ Online ಮೂಲಕ ಅರ್ಜಿ ಆಹ್ವಾನ.

(ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಅಭ್ಯರ್ಥಿಗಳು ಈ ಇಲಾಖೆಯಿಂದ ನೀಡುವ ತರಬೇತಿಗೆ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ)

ಸಂಖ್ಯೆ:ಹಿಂವಕಇ/ತ-4/ಸಿಇಟಿ/ಸಿಆರ್-1/2023-24 ದಿನಾಂಕ:13.11.2023.

1. ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಅಥವಾ 3(ಬಿ) ಗೆ ಸೇರಿರಬೇಕು.
2. ತರಬೇತಿಯನ್ನು ಬೆಂಗಳೂರು ನಗರ, ಮೈಸೂರು, ಹುಬ್ಬಳ್ಳಿ ಧಾರವಾಡ ಮತ್ತು ಕಲಬುರಗಿ ನಗರಗಳಲ್ಲಿಮಾತ್ರ ನೀಡುತ್ತಿದ್ದು, ಆಯಾ ಜಿಲ್ಲೆಯಲ್ಲಿ ಪ್ರಥಮ ಪಿ.ಯು.ಸಿ/10+1 ಅನ್ನು (ವಿಜ್ಞಾನ ವಿಭಾಗದಲ್ಲಿ) ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.
3. ಜಾತಿ ಮತ್ತು ಆದಾಯ ಪ್ರಮಾಣ ಪತ್ರವು ಕಡ್ಡಾಯವಾಗಿ ವಿದ್ಯಾರ್ಥಿಯ ಹೆಸರಿನಲ್ಲಿರಬೇಕು, ಇಲ್ಲದಿದ್ದಲ್ಲಿ ಅಂತಹ ವಿದ್ಯಾರ್ಥಿಯನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.
4. ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ ಗರಿಷ್ಠ ರೂ.6.00 ಲಕ್ಷಗಳು.
5. **ವಿದ್ಯಾರ್ಹತೆ:-** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸದರಿ ಪರೀಕ್ಷಾ ಪೂರ್ವ ತರಬೇತಿಗಳನ್ನು ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ/10ನೇ ತರಗತಿ ಪೂರ್ಣಗೊಳಿಸಿರಬೇಕು. ಎಸ್.ಎಸ್.ಎಲ್.ಸಿ/10ನೇ ತರಗತಿಯಲ್ಲಿ ಗಳಿಸಿರುವ ಶೇಕಡವಾರು ಅಂಕಗಳ ಆಧಾರದ ಮೇಲೆ ವಿದ್ಯಾರ್ಥಿಗಳನ್ನು ತರಬೇತಿಗೆ ಆಯ್ಕೆ ಮಾಡಲಾಗುವುದು.
6. ಅರ್ಹ ಆಸಕ್ತ ವಿದ್ಯಾರ್ಥಿಗಳು Online ಮೂಲಕವೇ ಅರ್ಜಿಗಳನ್ನು ಸಲ್ಲಿಸುವುದು. ಬೇರೆ ಯಾವ ಪ್ರಕಾರಗಳಲ್ಲೂ ಸಲ್ಲಿಸುವ ವಿದ್ಯಾರ್ಥಿಯ ಅರ್ಜಿಯನ್ನಾಗಲಿ ಅಥವಾ ಮನವಿಯನ್ನಾಗಲಿ ಪರಿಗಣಿಸಲಾಗುವುದಿಲ್ಲ.
7. CBSE ಮತ್ತು ICSE ಹಾಗೂ ಇತರೆ ರಾಜ್ಯಗಳಲ್ಲಿ (1 ರಿಂದ 10ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಮಾತ್ರ) ಹತ್ತನೇ ತರಗತಿಯಲ್ಲಿ ಉತ್ತೀರ್ಣರಾಗಿರುವ ಮತ್ತು ಸದರಿ ಕಾರ್ಯಕ್ರಮದಡಿ ತರಬೇತಿಗೆ ಅರ್ಹರಿರುವ ವಿದ್ಯಾರ್ಥಿಗಳು 10ನೇ ತರಗತಿಯ ವಿವರಗಳನ್ನು entry ಮಾಡಿಸಲು ತಮ್ಮ ಮನವಿ ಪತ್ರದೊಂದಿಗೆ ಕೆಳಕಂಡ ದಾಖಲೆಗಳ ಸಾಫ್ಟ್ ಕಾಪಿ (JPEG/JPG) ಗಳನ್ನು ಇ-ಮೇಲ್ ವಿಳಾಸ bcwd.training@gmail.com ಕ್ಕೆ ಕಳುಹಿಸಿದಲ್ಲಿ

ವಿವರಗಳನ್ನು ನಮೂದಿಸಿಕೊಡಲಾಗುವುದು, ನಂತರ ವಿದ್ಯಾರ್ಥಿಗಳು ತರಬೇತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

- ❖ ಎಸ್.ಎಸ್.ಎಲ್.ಸಿ/10ನೇ ತರಗತಿ ಅಂಕಪಟ್ಟಿ.
- ❖ ಜಾತಿ ಮತ್ತು ಆದಾಯ ದೃಢೀಕರಣ ಪತ್ರ.
- ❖ ಪ್ರಥಮ ಪಿಯುಸಿ/10+1 ರ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ಬಗ್ಗೆ ವಿದ್ಯಾರ್ಥಿಗಳಿಗೆ ಕಾಲೇಜಿನಿಂದ ನೀಡಿರುವ ಗುರುತಿನ ಚೀಟಿ ಅಥವಾ ಕಾಲೇಜಿಗೆ ದಾಖಲಾಗಿರುವ ಬಗ್ಗೆ ಫೀ ರೆಸಿಪ್ಟ್ (ವಿಜ್ಞಾನ ವಿಭಾಗದ ಬಗ್ಗೆ ಮಾಹಿತಿ & Combination ಬಗ್ಗೆ ಮಾಹಿತಿ ಇರಬೇಕು)

8. ತರಬೇತಿಯ ಪಠ್ಯಕ್ರಮ, ತರಬೇತಿ ಅವಧಿ: ಪ್ರಥಮ ವರ್ಷದಲ್ಲಿ ತರಬೇತಿಗೆ ಆಯ್ಕೆಯಾಗುವ ವಿದ್ಯಾರ್ಥಿಗೆ ಪ್ರಥಮ ಪಿ.ಯು.ಸಿ/10+1 ಗೆ ಹಾಗೂ ನಂತರದಲ್ಲಿ ದ್ವಿತೀಯ ಪಿ.ಯು.ಸಿ/10+2 ಗೆ ಸಂಬಂಧಿಸಿದಂತೆ NEET ಹಾಗೂ JEE (MAINS & ADVANCED) ಪರೀಕ್ಷಾ ಪೂರ್ವ ತರಬೇತಿಯನ್ನು ನೀಡಲಾಗುವುದು.

9. ವಿದ್ಯಾರ್ಥಿಯ ಪಾಸ್ ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ ಹಾಗೂ ಅದರ ಕೆಳಗೆ ವಿದ್ಯಾರ್ಥಿಯ ಸಹಿ ಬರುವಂತೆ JPEG/JPG format (15 ರಿಂದ 30 kilo byte ಒಳಗಿರುಬೇಕು) ನಲ್ಲಿ Upload ಮಾಡಬೇಕು.

10. ಅದೇ ರೀತಿ ಅರ್ಜಿಯಲ್ಲಿ ಅಪ್‌ಲೋಡ್ ಮಾಡಲು ತಿಳಿಸಿರುವ ಪ್ರತಿ ದಾಖಲೆಗಳನ್ನು JPEG/JPG format (200 ರಿಂದ 250 kilo byte ಒಳಗಿರಬೇಕು) ನಲ್ಲಿ Upload ಮಾಡಬೇಕು.

11. ವಿದ್ಯಾರ್ಥಿಯು ಅಂತಿಮವಾಗಿ ಅರ್ಜಿಯನ್ನು submit ಮಾಡುವ ಮುನ್ನ ಎಲ್ಲಾ ಅಂಶಗಳು ಸರಿಯಾಗಿರುವ ಬಗ್ಗೆ Preview ನೋಡಿ ಖಚಿತ ಪಡಿಸಿಕೊಳ್ಳಬೇಕು. ಸರಿಯಾಗಿ ಭರ್ತಿ ಮಾಡದೇ ಇರುವ, ದಾಖಲೆಗಳನ್ನು ಸಲ್ಲಿಸದಿರುವ ಹಾಗೂ ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

12. ವಿದ್ಯಾರ್ಥಿಯು ತಪ್ಪು ಮಾಹಿತಿ ನೀಡಿರುವುದು/ಅನರ್ಹ ವಿದ್ಯಾರ್ಥಿಯೆಂದು ಯಾವುದೇ ಹಂತದಲ್ಲಿ ಕಂಡು ಬಂದಲ್ಲಿ, ಅಂತಹ ವಿದ್ಯಾರ್ಥಿಯ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.

13. ಅರ್ಜಿಯ ಪ್ರತಿಯನ್ನು Print Option ನೀಡುವ ಮೂಲಕ ಪಡೆಯಬಹುದು.

14. ದಾಖಲೆಗಳ ಪರಿಶೀಲನೆಯನ್ನು ಆನ್-ಲೈನ್‌ನಲ್ಲಿ ನಡೆಸಲಾಗುವುದು. ಅಗತ್ಯವಿದ್ದಲ್ಲಿ ಮಾತ್ರ ನಿಗದಿತ ದಾಖಲೆಗಳನ್ನು ಈ ಕಛೇರಿಗೆ ಸಲ್ಲಿಸಬೇಕು.

**ಆನ್‌ಲೈನ್ ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು.**

- ಎಸ್.ಎಸ್.ಎಲ್.ಸಿ/10ನೇ ತರಗತಿ ಅಂಕ ಪಟ್ಟಿ.
- ಜಾತಿ ಮತ್ತು ಆದಾಯ ದೃಢೀಕರಣ ಪತ್ರ.
- ವಿಶೇಷ ಚೇತನ ವಿದ್ಯಾರ್ಥಿಯಾಗಿದ್ದಲ್ಲಿ ಆ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
- 2023-24ನೇ ಸಾಲಿನಲ್ಲಿ ಪ್ರಥಮ ಪಿ.ಯು.ಸಿ/10+1 (ವಿಜ್ಞಾನ ವಿಭಾಗ) ರಲ್ಲಿ ಪ್ರವೇಶ ಪಡೆದಿರುವ ಬಗ್ಗೆ ಪ್ರವೇಶ ಶುಲ್ಕದ ರಸೀದಿಗಳು (Admission Receipt).

- ಪ್ರಥಮ ಪಿ.ಯು.ಸಿ/10+1ರಲ್ಲಿ (ವಿಜ್ಞಾನ ವಿಭಾಗ) ಓದುತ್ತಿರುವ ಬಗ್ಗೆ ಕಾಲೇಜಿನಿಂದ ನೀಡಿರುವ ಗುರುತಿನ ಚೀಟಿ (Identity Card) ಅಥವಾ ಪ್ರಥಮ ಪಿ.ಯು.ಸಿ/10+1 ರ ವಿಜ್ಞಾನ ವಿಭಾಗದಲ್ಲಿ ಪ್ರವೇಶವನ್ನು ಪಡೆದಿದ್ದು, ಪ್ರಸಕ್ತ ಅಧ್ಯಯನ ಮಾಡುತ್ತಿರುವ ಬಗ್ಗೆ ಸಂಬಂಧಪಟ್ಟ ಕಾಲೇಜಿನಿಂದ ದೃಢೀಕರಣ ಪ್ರಮಾಣ ಪತ್ರ (ನಮೂನೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ).

15. ಭೌತಿಕ ಗುರಿಯನ್ನು ಅನುದಾನ ಲಭ್ಯತೆಗನುಗುಣವಾಗಿ ನಿಗದಿಪಡಿಸಲಾಗುವುದು. ಪ್ರವರ್ಗವಾರು ಮೀಸಲಾತಿ ಈ ಕೆಳಗಿನಂತಿರುತ್ತದೆ.

| ಕ್ರ.ಸಂ | ಪ್ರವರ್ಗ | ಶೇಕಡ |
|---|---|---|
| 1 | 1 | 15% |
| 2 | 2ಎ | 53% |
| 3 | 3ಎ | 15% |
| 4 | 3ಬಿ | 17% |
| | **ಒಟ್ಟು** | **100%** |

16. ವಿದ್ಯಾರ್ಥಿಗಳು ತರಬೇತಿಯನ್ನು ಮಧ್ಯಂತರದಲ್ಲಿ ಬಿಟ್ಟು ಹೋದಲ್ಲಿ/ತರಬೇತಿಯನ್ನು ಪೂರ್ಣಗೊಳಿಸದಿದ್ದಲ್ಲಿ, ಅವರ ತರಬೇತಿಗೆ ಆಗಿರುವ/ಆಗುವ ವೆಚ್ಚವನ್ನು ಅಂತಹ ವಿದ್ಯಾರ್ಥಿಗಳು/ಪೋಷಕರಿಂದ ವಸೂಲಾತಿ ಮಾಡಲಾಗುವುದು.

17. Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:04.12.2023 ರ ಸಂಜೆ 5:00 ಗಂಟೆ.

18. ವಿದ್ಯಾರ್ಥಿಗಳಿಗೆ ಒಂದು ಸೆಟ್ ಕೋರ್ಸ್ ಮೆಟಿರಿಯಲ್‌ಗಳನ್ನು ಸಂಸ್ಥೆಗಳಿಂದ ಉಚಿತವಾಗಿ ನೀಡಲಾಗುವುದು.

19. ತರಬೇತಿಯು ಉಚಿತವಾಗಿದ್ದು ವಿದ್ಯಾರ್ಥಿಗಳ ಶುಲ್ಕವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪಾವತಿಸಲಾಗುವುದು.

20. **ವಿಶೇಷ ಸೂಚನೆ:-** ಸದರಿ ಪರೀಕ್ಷಾ ಪೂರ್ವ ತರಬೇತಿಗಳಿಗೆ ಸಂಬಂಧಿಸಿದಂತೆ NEET ಹಾಗೂ JEE (MAINS & ADVANCED) ಪರೀಕ್ಷಾ ಪೂರ್ವ ತರಬೇತಿಗಳನ್ನುಬೆಂಗಳೂರು, ಮೈಸೂರು, ಹುಬ್ಬಳ್ಳಿ-ಧಾರವಾಡ ಮತ್ತು ಕಲಬುರಗಿ ನಗರಗಳಲ್ಲಿಮಾತ್ರ ನೀಡಲಿದ್ದು, ಅಭ್ಯರ್ಥಿಗಳು ತರಬೇತಿಗೆ ನಿಯಮಿತವಾಗಿ ಹಾಜರಾಗಬೇಕು. ಸರ್ಕಾರ ಕಾಲಕಾಲಕ್ಕೆ ನೀಡುವ ನಿರ್ದೇಶನದಂತೆ ಸದರಿ ಕೋಚಿಂಗ್ ಅನ್ನು ಕ್ಲಾಸ್ ರೂಂ (ಆಫ್‌ಲೈನ್) ಅಥವಾ ಆನ್‌ಲೈನ್ ಮೂಲಕ ನೀಡಲಾಗುವುದು.

ಸಹಾಯ ವಾಣಿ: 8050370004 (ಸಮಯ ಬೆಳಗ್ಗೆ 10.00 ರಿಂದ ಸಂಜೆ 5.30ರ ವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.

E:\TRAINING 4 IMP FILES\2023-24\T-4\JEE & NEET\NOTIFICATION.docx